# ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 15-03-2021 ಪ್ರಶ್ನೆ ಸಂಖ್ಯೆ : 967(1323)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಆರ್. ಧರ್ಮಸೇನ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 15-03-2021

ಉತ್ತರಿಸುವ ಸಚಿವರು: ಮಾನ್ಯ ಅರಣ್ಯ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು

ವಿಷಯ : ಟಿ. ನರಸೀಪುರದಲ್ಲಿ ಸಾಂಸ್ಕೃತಿಕ ಭವನ ನಿರ್ಮಾಣ

(ಅ) ಮೈಸೂರು ಜಿಲ್ಲೆ, ಟಿ. ನರಸೀಪುರದಲ್ಲಿ ಸಾಂಸ್ಕೃತಿಕ ಭವನ ನಿರ್ಮಾಣ ಮಾಡಲು 10 ಲಕ್ಷ ರೂಪಾಯಿ ಮಂಜೂರಾಗಿದ್ದು, ನಿವೇಶನ ಸಿಕಿಲ್ಲ ಎಂಬ ಕಾರಣದಿಂದ ಹಣ ಬಳಕೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಪ್ರಸ್ತುತ ವಿಷಯ ಯಾವ ಹಂತದಲ್ಲಿದೆ;

(ಆ) ಟಿ ನರಸೀಪುರ ಸಾಂಸ್ಕೃತಿಕ ಭವನಕ್ಕೆ ಪುರಸಭೆಯವರು ನಿವೇಶನ ಒದಗಿಸುತ್ತಾರೆಯೇ; ಒದಗಿಸಿದ್ದಲ್ಲಿ, ಕಟ್ಟಡ ನಿರ್ಮಾಣ ಕಾರ್ಯ ಯಾವಾಗನಿಂದ ಪ್ರಾರಂಭವಾಗಲಿದೆ;

(ಇ) ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಅಧಿಕಾರಿಗಳು ಆಸಕ್ತಿ ವಹಿಸಿ ಸಾಂಸ್ಕೃತಿಕ ಭವನ ನಿರ್ಮಾಣ ಕಾರ್ಯವನ್ನು ಈ ವರ್ಷವಾದರೂ ಪ್ರಾರಂಭ ಮಾಡುವುದೇ?